**All India Radio: Bangalore**
**National Bulletins In Kannada**
**15.07.2025 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**15.07.2025 / 19.35 hrs**
**<><*<><>*><>**

**ಮುಖ್ಯಾಂಶಗಳು**

**೧.  ಭಾರತದ ಶುಭಾಂಶು ಶುಕ್ಲಾ ಹಾಗೂ ಇತರ ಮೂವರು ಗಗನಯಾತ್ರಿಗಳು ಸುರಕ್ಷಿತವಾಗಿ ಭೂಮಿಗೆ**

**೨.  ೧೮ ದಿನಗಳ ಯಶಸ್ವಿ ಐಸಿಹಾಸಿಕ ಮಿಷನ್ ಪೂರೈಸಿದ ತಂಡಕ್ಕೆ ರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರ ಅಭಿನಂದನೆ**

**೩.  ವಿದ್ಯಾರ್ಥಿಗಳು ಮಾತೃ ಭಾಷೆಯಲ್ಲೇ ಶಿಕ್ಷಣ ಪಡೆಯುವಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ**

**೪.  ಡಿಆರ್‌ಡಿಓ ದಿಂದ ಸ್ಥಳೀಯವಾಗಿ ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಿದ ಆರು ಕಾರ್ಯತಂತ್ರ ಉತ್ಪನ್ನಗಳು ಭಾರತೀಯ ನೌಕಾಪಡೆಗೆ ಹಸ್ತಾಂತರ**

**<><*<><>*><>**

ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಮತ್ತು ಆಕ್ಸಿಯಮ್ -೪ ಮಿಷನ್‌ನ ಇತರ ಮೂವರು ಗಗನಯಾತ್ರಿಗಳು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ತಮ್ಮ ೧೮ ದಿನಗಳ ಐತಿಹಾಸಿಕ ಕಾರ್ಯಾಚರಣೆಯ ನಂತರ ಸುರಕ್ಷಿತವಾಗಿ ಭೂಮಿಗೆ ಮರಳಿದರು.  ಸ್ಪೇಸ್‌ಎಕ್ಸ್ ಡ್ರ್ಯಾಗನ್ ಬಾಹ್ಯಾಕಾಶ ನೌಕೆ ಇಂದು ಮಧ್ಯಾಹ್ನ ಕ್ಯಾಲಿಫೋರ್ನಿಯಾದ ಸ್ಯಾನ್ ಡಿಯಾಗೋ ಕರಾವಳಿಯ ಪೆಸಿಫಿಕ್ ಮಹಾಸಾಗರಕ್ಕೆ ಅಪ್ಪಳಿಸಿತು. ಭೂಮಿಯ ಗುರುತ್ವಾಕರ್ಷಣೆಗೆ ಹೊಂದಿಕೊಳ್ಳಲು ಗಗನಯಾತ್ರಿಗಳು ಏಳು ದಿನಗಳ ಪುನರ್ವಸತಿ ಕಾರ್ಯಕ್ರಮಕ್ಕೆ ಒಳಗಾಗಲಿದ್ದಾರೆ. ಆಕ್ಸಿಯಮ್ -೪ ಮಿಷನ್‌ನ ಬಾಹ್ಯಾಕಾಶ ಯಾತ್ರೆ ಕಳೆದ ತಿಂಗಳು ೨೫ ರಂದು ಫ್ಲೋರಿಡಾದಿಂದ ಡ್ರ್ಯಾಗನ್ ಬಾಹ್ಯಾಕಾಶ ಕೋಶವನ್ನು ಹೊತ್ತ ಫಾಲ್ಕನ್ -೯ ರಾಕೆಟ್ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಉಡಾವಣೆಗೊಂಡಿತ್ತು. ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ, ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ- ಐಎಸ್‌ಎಸ್ ಗೆ ಭೇಟಿ ನೀಡಿದ ಮೊದಲ ಭಾರತೀಯ ಹಾಗೂ ೧೯೮೪ ರಲ್ಲಿ ಬಾಹ್ಯಾಕಾಶಕ್ಕೆ ಹೋದ ವಿಂಗ್ ಕಮಾಂಡರ್ ರಾಕೇಶ್ ಶರ್ಮಾ ನಂತರ ಎರಡನೇ ಭಾರತೀಯ ಗಗನಯಾತ್ರಿಯಾಗಿದ್ದಾರೆ.  ಐಎಸ್‌ಎಸ್ ನಲ್ಲಿ ತಮ್ಮ ವಾಸ್ತವ್ಯದ ಸಮಯದಲ್ಲಿ, ಶುಕ್ಲಾ ಏಳು ಭಾರತ-ನಿರ್ದಿಷ್ಟ ಸೂಕ್ಷ್ಮ ಗುರುತ್ವಾಕರ್ಷಣ ಪ್ರಯೋಗಗಳನ್ನು ನಡೆಸಿದರು. ಈ ಪ್ರಯೋಗಗಳನ್ನು ಭವಿಷ್ಯದ ಗ್ರಹ ಕಾರ್ಯಾಚರಣೆಗಳು ಮತ್ತು ದೀರ್ಘಾವಧಿಯ ಬಾಹ್ಯಾಕಾಶ ವಾಸಕ್ಕಾಗಿ ನಿರ್ಣಾಯಕ ದತ್ತಾಂಶವನ್ನು ಉತ್ಪಾದಿಸಲು ವಿನ್ಯಾಸಗೊಳಿಸಲಾಗಿದೆ.  'ಆಕಾಶ ಗಂಗಾ' ಎಂದೂ ಕರೆಯಲಾಗುತ್ತಿರುವ ಈ ಮಿಷನ್, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ- ಇಸ್ರೋ ಮತ್ತು ಆಕ್ಸಿಯಮ್ ಸ್ಪೇಸ್, ಅಮೆರಿಕಾದ ಬಾಹ್ಯಾಕಾಶ ಸಂಸ್ಥೆ ನಾಸಾ ಸಹಯೋಗದ ಪ್ರಯತ್ನವಾಗಿದೆ.

**<><*<><>*><>**

ಬಾಹ್ಯಾಕಾಶ ಪ್ರಯಾಣದ ನಂತರ ಭೂಮಿಗೆ ಮರಳಿದ ಭಾರತದ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಸ್ವಾಗತಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ರಾಷ್ಟ್ರಪತಿಗಳು, ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಆಕ್ಸಿಯಮ್ ಮಿಷನ್-೪ ಅನ್ನು ಮುನ್ನಡೆಸುವಲ್ಲಿ ಗ್ರೂಪ್ ಕ್ಯಾಪ್ಟನ್ ಶುಕ್ಲಾ ಅವರ ಪಾತ್ರವು ಭಾರತದ ಬಾಹ್ಯಾಕಾಶ ಪರಿಶೋಧನೆಗೆ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಅಂತರರಾಷ್ಟ್ರೀಯ ಸಹಯೋಗಕ್ಕೆ ಹೊಸ ಮೈಲಿಗಲ್ಲನ್ನು ಸೃಷ್ಟಿಸಿದೆ ಎಂದು ಹೇಳಿದ್ದಾರೆ. ಈ ಕಾರ್ಯಾಚರಣೆಯಲ್ಲಿ ಭಾಗಿಯಾಗಿರುವ ಪ್ರತಿಯೊಬ್ಬರನ್ನು ಅವರು ಅಭಿನಂದಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ

ಅವರು, ಬಾಹ್ಯಾಕಾಶ ಮಿಷನ್‌ನಿಂದ ಸುರಕ್ಷಿತವಾಗಿ ಹಿಂತಿರುಗಿದ  ಭಾರತದ ಗಗನಯಾತ್ರಿ ಶುಭಾಂಶು ಶುಕ್ಲಾ ಅವರನ್ನು ಅಭಿನಂದಿಸಿದ್ದಾರೆ. ಐತಿಹಾಸಿಕ ಮಿಷನ್ ಪೂರ್ತಿಗೊಳಿಸಿ ವಾಪಾಸಾದ ಶುಕ್ಲಾ ಅವರನ್ನು ದೇಶದ ಜನತೆಯೊಂದಿಗೆ ಸೇರಿ ತಾವು ಸ್ವಾಗತಿಸುತ್ತಿರುವುದಾಗಿ ಹೇಳಿದ್ದಾರೆ. ಶುಕ್ಲಾ ಅವರು ಅಂತಾರಾಷ್ಟ್ರೀಯ ಅಂತರಿಕ್ಷ ನಿಲ್ದಾಣದಕ್ಕೆ ಭೇಟಿ ನೀಡಿದ ಮೊದಲ ಭಾರತೀಯ ಗಗನಯಾತ್ರಿಯಾಗಿದ್ದಾರೆ. ತಮ್ಮ ಸಮರ್ಪಣಾ ಮನೋಭಾವ ಹಾಗೂ ಧೈರ್ಯದ ಮೂಲಕ ಕೋಟ್ಯಾಂತರ ಕನಸುಗಳಿಗೆ ಸ್ಫೂರ್ತಿಯಾಗಿದ್ದಾರೆ. ದೇಶದ ಮಾನವ ಸಹಿತ ಅಂತರಿಕ್ಷಯಾನ-ಗಗನಯಾನದತ್ತ ಇದೊಂದು ಮೈಲುಗಲ್ಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಡಾ.ಜಿತೇಂದ್ರ ಸಿಂಗ್, ಈ ಯಶಸ್ವಿ ಯಾನ, ವಿಶ್ವದ ಬಾಹ್ಯಾಕಾಶ ಆಶಯಗಳಲ್ಲಿ ಭಾರತಕ್ಕೆ ಸ್ಥಾನ ಗಳಿಸಿಕೊಟ್ಟಿದೆ ಎಂದು ಹೇಳಿದ್ದಾರೆ.

**ಧ್ವನಿ: ಡಾ.ಜಿತೇಂದ್ರ ಸಿಂಗ್ ( ೨೮ ಸೆಕೆಂಡ್ಸ್)**

ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರ ಸುರಕ್ಷಿತ ವಾಪಾಸಾತಿ ಬಗ್ಗೆ ತಾಯಿ ಆಶಾ ಶುಕ್ಲಾ ಹಾಗೂ ತಂದೆ ಶಂಭು ಶುಕ್ಲಾ ಸಂತಸ ಹಾಗೂ ಹೆಮ್ಮೆ ವ್ಯಕ್ತಪಡಿಸಿದ್ದಾರೆ.

**ಧ್ವನಿ; ತಾಯಿ-ತಂದೆ ( ೧೮ ಸೆಕೆಂಡ್ಸ್)**

**<><*<><>*><>**

ಮೊದಲ ಬಾರಿ ರಫ್ತುದಾರರಿಗೆ, ಒಂದು ಜಿಲ್ಲೆ, ಒಂದು ಉತ್ಪನ್ನ ಕಾರ್ಯಕ್ರಮದಡಿ ಹೊಸ ಮಾರುಕಟ್ಟೆ ಒದಗಿಸಿ ಅವರನ್ನು ಪ್ರೋತ್ಸಾಹಿಸಲು ಸದ್ಯದಲ್ಲೇ ಹೊಸ ಮಾರ್ಗದರ್ಶಿ ಸೂತ್ರಗಳನ್ನು ತರಲಾಗುತ್ತಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಉದ್ದಿಮೆ ಖಾತೆ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಅವರು ನವದೆಹಲಿಯಲ್ಲಿಂದು ಒಂದು ಜಿಲ್ಲೆ, ಒಂದು ಉತ್ಪನ್ನ -೨೦೨೪ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದರು. ಭಾರತ, ವೈವಿಧ್ಯಮಯ ಉತ್ಪನ್ನಗಳನ್ನು ಜಾಗತಿಕ ಮಾರುಕಟ್ಟೆಗೆ ಪೂರೈಸಬಹುದಾಗಿದೆ. ಒಂದು ಜಿಲ್ಲೆ, ಒಂದು ಉತ್ಪನ್ನ ಕಾರ್ಯಕ್ರಮ ವಿಶಿಷ್ಟವಾದ ಉಪಕ್ರಮವಾಗಿದೆ ಸದ್ಯ ಔದ್ಯಮಿಕ ಬಂಡಾವಳ ಹೂಡಿಕೆ ನೀತಿಯಡಿ ೮೭ ಉತ್ಪನ್ನಗಳ ಪೈಕಿ ೬೪ ಉತ್ಪನ್ನಗಳನ್ನು ಒಳಗೊಂಡಿದೆ ಎಂದು ಸಚಿವ ಪಿಯೂಷ್ ಗೋಯಲ್ ಹೇಳಿದರು.

**<><*<><>*><>**

ಜಾಗತಿಕವಾಗಿ ಸೂಪರ್ ಪವರ್ ಆಗುವುದು ಭಾರತದ ರಾಷ್ಟ್ರೀಯ ಗುರಿಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.  ತಮ್ಮ ತವರು ರಾಜ್ಯ ಒಡಿಶಾಗೆ ಎರಡು ದಿನಗಳ ಭೇಟಿಯಲ್ಲಿರುವ ರಾಷ್ಟ್ರಪತಿಗಳು, ಕಟಕ್‌ನ ರಾವೆನ್‌ಶಾ ವಿಶ್ವವಿದ್ಯಾಲಯದ ೧೩ ನೇ ವಾರ್ಷಿಕ ಘಟಿಕೋತ್ಸವದಲ್ಲಿಂದು ಭಾಗವಹಿಸಿ ಮಾತನಾಡಿದರು. ಮೂಲಸೌಕರ್ಯ, ಆರೋಗ್ಯ ರಕ್ಷಣೆ, ಬಾಹ್ಯಾಕಾಶ, ವಿಜ್ಞಾನ ಮತ್ತು ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ಇತರ ಹಲವು ಕ್ಷೇತ್ರಗಳಲ್ಲಿ ಭಾರತ ಬಹು ದೂರ ಸಾಗಿದೆ ಎಂದರು.  ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಗುರಿಯನ್ನು ಸಾಧಿಸುವುದರ ಜೊತೆಗೆ ರಾಷ್ಟ್ರ ನಿರ್ಮಾಣ ಮತ್ತು ಭಾರತದ ಭವಿಷ್ಯವನ್ನು ರೂಪಿಸುವಲ್ಲಿ ಶಿಕ್ಷಣವು ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅವರು ಹೇಳಿದರು.  ವಿದ್ಯಾರ್ಥಿಗಳು ತಮ್ಮ ಜೀವಿತಾವಧಿಯಲ್ಲಿ 'ದೇಶ ಮೊದಲು, ಮಣ್ಣು ಮೊದಲು' ಎಂಬ ಪ್ರತಿಜ್ಞೆ ಮಾಡಬೇಕು. ಸಮಗ್ರತೆ ಮತ್ತು ಜವಾಬ್ದಾರಿಯೊಂದಿಗೆ ಸಮಾಜಕ್ಕೆ ಸೇವೆ ಸಲ್ಲಿಸಲು ತಮ್ಮನ್ನು ತಾವು ಅರ್ಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.  ತಮ್ಮ ವಿದ್ಯಾಭ್ಯಾಸ ಪೂರ್ಣಗೊಳಿಸಿದ ನಂತರ ವಿದ್ಯಾರ್ಥಿಗಳು, ಉದ್ಯೋಗಾಕಾಂಕ್ಷಿಗಳಾಗಬಾರದು ಬದಲಿಗೆ ಉದ್ಯೋಗ ನೀಡುವವರಾಗಬೇಕು ಮತ್ತು ನವೀನ ಉದ್ಯಮಗಳನ್ನು ಪ್ರಾರಂಭಿಸಬೇಕು ಎಂದು ವಿದ್ಯಾರ್ಥಿಗಳಿಗೆ ಈ ಸಂದರ್ಭದಲ್ಲಿ ಕಿವಿಮಾತು ಹೇಳಿದರು. ನಂತರ ಆದಿಕವಿ ಸರಳದಾಸ್ ಅವರ ೬೦೦ನೇ ಜಯಂತಿ ಮಹೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ವಿದ್ಯಾರ್ಥಿಗಳು ತಮ್ಮ ಮಾತೃ ಭಾಷೆಯಲ್ಲಿ ಶಿಕ್ಷಣ ಪಡೆಯಬೇಕು. ಇದರಿಂದ ಭಾರತದ ಶ್ರೀಮಂತ ಸಂಸ್ಕೃತಿಯನ್ನು ಸಂರಕ್ಷಿಸಿದಂತಾಗುತ್ತದೆ ಹಾಗೂ ಪರಂಪರೆಯನ್ನು ಮುಂದುವರಿಸದಂತಾಗುತ್ತದೆ. ವಿದ್ಯಾರ್ಥಿಗಳು ಮಾತೃ ಭಾಷಾ ಮಾಧ್ಯಮದಲ್ಲಿ ಶಿಕ್ಷಣವನ್ನು ಪಡೆಯುವುದರಿಂದ ಅವರ ಪ್ರತಿಭೆ ಕೂಡ ಉತ್ತಮಗೊಳ್ಳುತ್ತದೆ ಎಂದರು. ಮಾತೃ ಭಾಷೆಯ ಬಗ್ಗೆ ಪ್ರತಿಯೊಬ್ಬರು ಹೆಮ್ಮೆಪಡಬೇಕು ಹಾಗೂ ಮಾತೃ ಭಾಷೆ ಸಂರಕ್ಷಣೆ ಎಲ್ಲರ ಕರ್ತವ್ಯವಾಗಿದೆ. ವಿದ್ಯಾರ್ಥಿಗಳು ತಮ್ಮ ಜ್ಞಾನದ ದೃಷ್ಟಿಕೋನವನ್ನು ವಿಸ್ತೃತಗೊಳಿಸಿಕೊಳ್ಳಲು ಸಾಧ್ಯವಾದಷ್ಟು ಇತರ

ಭಾಷೆಗಳನ್ನು ಕಲಿಯಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು. ಇದೇ ಸಂದರ್ಭದಲ್ಲಿ ಅವರು, ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಅವರಿಗೆ ೨೦೨೪ರ ಕಳಿಂಗ ರತ್ನ ಪ್ರಶಸ್ತಿ ನೀಡಿ ಸನ್ಮಾನಿಸಿದರು.

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಡಿದ್ದು ನವದೆಹಲಿಯಲ್ಲಿ ೨೦೨೪-೨೫ನೇ ಸಾಲಿನ ಪ್ರತಿಷ್ಠಿತ ಸ್ವಚ್ಛ ಸರ್ವೇಕ್ಷಣ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.  'ಸ್ವಚ್ಛ ಭಾರತ ನಗರ ಮಿಷನ್' ನಗರಗಳ ಅವಿಶ್ರಾಂತ ಪ್ರಯತ್ನಗಳನ್ನು ಗುರುತಿಸುತ್ತದೆ. ಈ ವರ್ಷ, ಸೂಪರ್ ಸ್ವಚ್ಛ ಲೀಗ್ ನಗರಗಳು ಮತ್ತು ಐದು ಜನಸಂಖ್ಯೆ ವಿಭಾಗಗಳಲ್ಲಿ ಅಗ್ರ ಮೂರು ಸ್ವಚ್ಛ ನಗರಗಳು ಸೇರಿದಂತೆ ನಾಲ್ಕು ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ. ಈ ವರ್ಷ ಒಟ್ಟು ೭೮ ಪ್ರಶಸ್ತಿಗಳನ್ನು ನೀಡಲಾಗುವುದು ಎಂದು ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ತಿಳಿಸಿದೆ.  ಸ್ವಚ್ಛ ಸರ್ವೇಕ್ಷಣ ೨೦೨೪-೨೫ ನಗರ ಸ್ವಚ್ಛತೆ ಮತ್ತು ಸೇವಾ ವಿತರಣೆಯನ್ನು ನಿರ್ಣಯಿಸಲು ಸ್ಮಾರ್ಟ್, ರಚನಾತ್ಮಕ ವಿಧಾನವನ್ನು ಅಳವಡಿಸಿಕೊಂಡಿದೆ. ಇದು ನಗರಗಳಲ್ಲಿ ನೈರ್ಮಲ್ಯ ಮತ್ತು ತ್ಯಾಜ್ಯ ನಿರ್ವಹಣೆಯ ಸಂಪೂರ್ಣ ನೋಟವನ್ನು ನೀಡುತ್ತದೆ ಎಂದು ಸಚಿವಾಲಯ ತಿಳಿಸಿದೆ.

**<><*<><>*><>**

ಯಮನ್‌ನಲ್ಲಿರುವ ಭಾರತದ ನರ್ಸ್ ನಿಮಿಷಾ ಪ್ರಿಯಾ ಅವರ ಮರಣದಂಡನೆ ಜಾರಿ, ಮುಂದೂಡಲ್ಪಟ್ಟಿದೆ. ಅವರ ಮರಣದಂಡನೆ ತಪ್ಪಿಸುವ  ನಿಟ್ಟಿನಲ್ಲಿ ಪ್ರಯತ್ನ ನಡೆಸಲಾಗುತ್ತಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

**<><*<><>*><>**

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ-ಡಿಆರ್‌ಡಿಒ, ಇಂದು ಭಾರತೀಯ ನೌಕಾಪಡೆಗೆ ಸ್ಥಳೀಯವಾಗಿ ವಿನ್ಯಾಸಗೊಳಿಸಿದ ಹಾಗೂ ಅಭಿವೃದ್ಧಿಪಡಿಸಿದ ಆರು ಕಾರ್ಯತಂತ್ರದ ಉತ್ಪನ್ನಗಳನ್ನು ಹಸ್ತಾಂತರಿಸಿತು.  ಗಾಮಾ ವಿಕಿರಣ ವೈಮಾನಿಕ ಕಣ್ಗಾವಲು ವ್ಯವಸ್ಥೆ, ಪರಿಸರ ಕಣ್ಗಾವಲು ವಾಹನ, ವಾಹನ ವಿಕಿರಣ ಮಾಲಿನ್ಯ ಮೇಲ್ವಿಚಾರಣಾ ವ್ಯವಸ್ಥೆ, ನೀರೊಳಗಿನ ಗಾಮಾ ವಿಕಿರಣ ಮೇಲ್ವಿಚಾರಣಾ ವ್ಯವಸ್ಥೆ, ತ್ಯಾಜ್ಯ ಹೊರತೆಗೆಯುವ ಸಾಧನ ಮತ್ತು ಅಡ್ಡ ಮಾಲಿನ್ಯ ಪರಿವೀಕ್ಷಣೆ ಹಾಗೂ ಅಂಗ ವಿಕಿರಣಶೀಲತೆ ಪತ್ತೆ ವ್ಯವಸ್ಥೆಗಳನ್ನು ರಾಜಸ್ಥಾನದ ಜೋಧ್‌ಪುರದ ನೌಕಾಪಡೆಯ ಸಹಾಯಕ ಮುಖ್ಯಸ್ಥ ರಿಯರ್ ಅಡ್ಮಿರಲ್ ಶ್ರೀರಾಮ್ ಅಮುರ್ ಅವರಿಗೆ ಈ ಉತ್ಪನ್ನಗಳನ್ನು ಹಸ್ತಾಂತರಿಸಲಾಯಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ  <>*><>**